# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 556 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಚಿದಾನಂದ್ ಎಂ. ಗೌಡ |
| ಉತ್ತರಿಸಬೇಕಾದ ದಿನಾಂಕ | : | 19.07.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರಿಗೆ ನೀಡುತ್ತಿರುವ ವೇತನವೆಷ್ಟು; ಕೋರ್ಟ್ ಆದೇಶದ ಮೇಲೆ 15-20 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರು ಅಡುಗೆಯವರು ಮತ್ತು ಸ್ವಚ್ಛತಾ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನವೆಷ್ಟು;</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳಲ್ಲಿ ಪ್ರಾಂಶುಪಾಲರು ಮತ್ತು ಶಿಕ್ಷಕರಿಗೆ ನೀಡುತ್ತಿರುವ ವೇತನದ ವಿವರ ಈ ಕೆಳಕಂಡಂತಿದೆ.
<table>
<tr><th>ಕ. ಸಂ.</th><th>ಹುದ್ದೆಯ ವಿವರ</th><th>ಖಾಯಂ ಸಿಬ್ಬಂದಿಗಳಿಗೆ ನೀಡುತ್ತಿರುವ ಒಟ್ಟು ವೇತನದ ಮಾಹಿತಿ</th><th>ಹೊರ ಸಂಪನ್ಮೂಲ ಸಿಬ್ಬಂದಿಗಳಿಗೆ ನೀಡುತ್ತಿರುವ ಒಟ್ಟು ವೇತನದ ಮಾಹಿತಿ.</th></tr>
<tr><td>1</td><td>ಪ್ರಾಂಶುಪಾಲರು</td><td>43100/-</td><td>17778/-</td></tr>
<tr><td>2</td><td>ಶಿಕ್ಷಕರು</td><td>33450/-</td><td>16,650/-</td></tr>
<tr><td>3</td><td>ಅಡುಗೆಯವರು</td><td>-</td><td>19,723/-</td></tr>
<tr><td>4</td><td>ಸ್ವಚ್ಛತಾ ಸಿಬ್ಬಂದಿಗಳು</td><td>-</td><td>18,062</td></tr>
</table>
</td></tr>
<tr><td>ಆ</td><td>ಕೋರ್ಟ್ ಆದೇಶದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರ ಶಿಕ್ಷಕರ ವೇತನ ಹೆಚ್ಚಳದ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಹೆಚ್ಚಳ ಮಾಡಲಾಗುವುದು;</td><td>ಕೋರ್ಟ್ ಆದೇಶದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರ ವೇತನ ಹೆಚ್ಚಳದ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.</td></tr>
<tr><td>ಇ</td><td>ಕೋರ್ಟ್ ಆದೇಶದ ಮೇಲೆ ಮತ್ತು ಹೊರಗುತ್ತಿಗೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕನಿಷ್ಟ ವೇತನ ಸಹ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರ ವೇತನ ತಾರತಮ್ಯ ನಿವಾರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು;</td><td>ಹೊರಗುತ್ತಿಗೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಾರ್ಮಿಕ ಕಲ್ಯಾಣ ಇಲಾಖೆಯು ನಿಗಧಿಪಡಿಸಿರುವ ಕನಿಷ್ಟ ವೇತನದಂತೆ ವೇತನ ಪಾವತಿಸಲಾಗುತ್ತಿದೆ. ವೇತನ ಪಾವತಿಯಲ್ಲಿ ಯಾವುದೇ ತಾರತಮ್ಯ ಇರುವುದಿಲ್ಲ.</td></tr>
</table>

| | | |
|---|---|---|
| ಈ | ಕೋರ್ಟ್ ಆದೇಶದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಸೇವಾ ಭದ್ರತೆ ನೀಡುವಂತೆ ಮಾನ್ಯ ಉಚ್ಛ ನ್ಯಾಯಾಲಯ ಆದೇಶಿಸಿದೆಯೇ; ಆದೇಶಿಸಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ 8442/2020 ಮತ್ತು ಇನ್ನಿತರ ಸಂಯೋಜಿತ ಪ್ರಕರಣಗಳ ಅಂತಿಮ ಆದೇಶದ ದಿನಾಂಕ:04.07.2022ರನ್ವಯ ಸೇವಾ ಭದ್ರತೆ ನೀಡುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ (ಸೇವಾ ನಿಯಮಗಳು-1) ಇಲಾಖೆಗಳು ಸಹಮತಿ ನೀಡಿರುವುದಿಲ್ಲ. ಸದರಿ ಪ್ರಸ್ತಾವನೆಯನ್ನು ಸಚಿವ ಸಂಪುಟದಲ್ಲಿ ಮಂಡಿಸಲು ಅನುಮೋದನೆ ಕೋರಿ ಕಡತವನ್ನು ಸಲ್ಲಿಸಲಾಗಿತ್ತು. ಸದರಿ ಪ್ರಸ್ತಾವನೆಗೆ ಮಾನ್ಯ ಮುಖ್ಯಮಂತ್ರಿಯವರು ಒಪ್ಪಿರುವುದಿಲ್ಲ ಎಂದು ಸೂಚಿಸಿ, ಕಡತವನ್ನು ಹಿಂದಿರುಗಿಸಲಾಗಿದೆ. |

ಸಕಇ 168 ಎಂಡಿಎಸ್ 2024

(ಡಾ.ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.